ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಖಾಸಗಿ ಅನುದಾನಿತ ಶಾಲಾ/ಕಾಲೇಜಿನ ಖಾಲಿ ಹುದ್ದೆ ಭರ್ತಿಗೆ ಅನುಮೋದನೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

791 (976) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ 2015ನೇ ಸಾಲಿನ ಅಂತ್ಯದವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಮತಿ ನೀಡಿದೆಯೇ ;

(ಆ) ಇದುವರೆವಿಗೂ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಸರ್ಕಾರದ ವಿವಿಧ ಹಂತಗಳಲ್ಲಿ ಇರುವ ಕಡತಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಸದರಿ ಕಡತಗಳಿಗೆ ಅನುಮೋದನೆ ನೀಡಲು ಆರ್ಥಿಕ ಇಲಾಖೆ ಇತ್ತೀಚೆಗೆ ತಡೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಈ) ಹಾಗಾದಲ್ಲಿ ತಡೆಹಿಡಿಯಲು ಕಾರಣಗಳೇನು ; (ವಿವರ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ಸದರಿ ಕಡತಗಳಿಗೆ ಅನುಮೋದನೆ ನೀಡಲಾಗುವುದು?